ಕರ್ನಾಟಕ ಸರ್ಕಾರ

ಹಿಂಬರಹ ಸಂಖ್ಯೆ: ಡಿಟಿಇ 04 ಡಿವಿಪಿ (1) 2019/1865

ನಿರ್ದೇಶಕರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
"ತಾಂತ್ರಿಕ ಶಿಕ್ಷಣ ಭವನ",
ಅರಮನೆ ರಸ್ತೆ,
ಬೆಂಗಳೂರು-560 001.
ದಿನಾಂಕ: 18-12-2019

ಸರ್ಕಾರದ ಆದೇಶ ಸಂಖ್ಯೆ: ಇಡಿ 16 ಟಿಪಿಇ 2017, ದಿನಾಂಕ 11-12-2019 ರ ಆದೇಶದ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ನಿರ್ದೇಶಕರು
ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
18/12/19 ಬೆಂಗಳೂರು.

ಇವರಿಗೆ,

1) ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳ ಮಾಹಿತಿಗಾಗಿ.
2) ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳ ಮಾಹಿತಿಗಾಗಿ
3) ಜಂಟಿ ನಿರ್ದೇಶಕರು (ಆಡಳಿತ), ನಿರ್ದೇಶನಾಲಯ, ಬೆಂಗಳೂರು
4) ಜಂಟಿ ನಿರ್ದೇಶಕರು (ಪರೀಕ್ಷೆ), ನಿರ್ದೇಶನಾಲಯ, ಬೆಂಗಳೂರು
5) ಜಂಟಿ ನಿರ್ದೇಶಕರು (ಸಿಡಿಸಿ), ನಿರ್ದೇಶನಾಲಯ, ಬೆಂಗಳೂರು
6) ಜಂಟಿ ನಿರ್ದೇಶಕರು (ತನಿಖೆ), ನಿರ್ದೇಶನಾಲಯ, ಬೆಂಗಳೂರು
7) ಆಡಳಿತಾಧಿಕಾರಿಗಳು, ನಿರ್ದೇಶನಾಲಯ, ಬೆಂಗಳೂರು
8) ಲೆಕ್ಕಾಧಿಕಾರಿಗಳು ನಿರ್ದೇಶನಾಲಯ, ಬೆಂಗಳೂರು
9) ರಿಜಿಸ್ಟ್ರಾರ್, ನಿರ್ದೇಶನಾಲಯ, ಬೆಂಗಳೂರು
10) ಅಧೀಕ್ಷಕರು, ಇಎಸ್‌ಟಿ (4) ವಿಭಾಗ, ನಿರ್ದೇಶನಾಲಯ, ಬೆಂಗಳೂರು
11) ಅಧೀಕ್ಷಕರು, ಎಸಿಎಂ ವಿಭಾಗ, ನಿರ್ದೇಶನಾಲಯ, ಬೆಂಗಳೂರು
12) ಅಧೀಕ್ಷಕರು, ನಗದು ವಿಭಾಗ, ನಿರ್ದೇಶನಾಲಯ, ಬೆಂಗಳೂರು
13) ಕಾರ್ಯನಿರ್ವಾಹಕರು, ಇಎಸ್‌ಟಿ 2(ಬಿ)/ ಇಎಸ್‌ಟಿ (4)ಎ / ಇಎಸ್‌ಟಿ (4)ಬಿ /ಬಿಯುಡಿ/ನಗದು
14) ಇ-ಗವರ್ನೆನ್ಸ್ ವಿಭಾಗ – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರಿಗೆ ಮಾಸಿಕ ವೇತನ ಭತ್ಯೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಇಡಿ 236 ಟಿಪಿಇ 2007, ದಿನಾಂಕ: 01.12.2008.
2. ತಾಂತ್ರಿಕ ಶಿಕ್ಷಣ ನಿರ್ದೇಶಕರ ಪತ್ರ ಸಂಖ್ಯೆ: ಡಿಟಿಇ 04 ಡಿವಿಪಿ(1) 2019 ದಿನಾಂಕ: 16.09.2019, 16.10.2019, 10.04.2019, 01.08.2018 ಮತ್ತು 01.10.2018

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಸಂಭಾವನೆಯನ್ನು ಕ್ರಮವಾಗಿ ರೂ.7,500/- ಹಾಗೂ ರೂ.10,000/-ಗಳನ್ನು ನಿಗಧಿಪಡಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರಗಳಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ಅರೆಕಾಲಿಕ ಉಪನ್ಯಾಸಕರ ಭತ್ಯೆಯನ್ನು 2008 ರಲ್ಲಿ ನಿಗದಿಗೊಳಿಸಿದ್ದು, ಸುಮಾರು ಹತ್ತು ವರ್ಷಗಳು ಕಳೆದರೂ ಸಹ ಹೆಚ್ಚಳ ಮಾಡಿರುವುದಿಲ್ಲ. ಆದ್ದರಿಂದ, ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಗುಣಾತ್ಮಕ ಮತ್ತು ಬದ್ಧತೆಯುಳ್ಳ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯುವ ಸಲುವಾಗಿ ಅವರುಗಳ ಮಾಸಿಕ ಸಂಭಾವನೆಯನ್ನು ಪರಿಷ್ಕರಿಸುವ ಅಗತ್ಯವಿದೆ ಎಂದು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು, ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 16 ಟಿಪಿಇ 2017**

**ಬೆಂಗಳೂರು, ದಿನಾಂಕ: 11ನೇ ಡಿಸೆಂಬರ್ 2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಮಾಸಿಕ ಗೌರವ ಧನವನ್ನು ರೂ.7,500/- ರಿಂದ 12,500/-ಕ್ಕೆ ಹಾಗೂ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಗೌರವ ಧನವನ್ನು ರೂ.10,000/- ಗಳಿಂದ 15,000/-ಕ್ಕೆ ಹೆಚ್ಚಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 525 ವೆಚ್ಚ-8/2019, ದಿನಾಂಕ: 19.11.2019ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

11/12/19
(ಎಂ.ಜಿ ವೆಂಕಟೇಶಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಗೆ

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪಟ್ಟಿಗೆ ಸಂಖ್ಯೆ:5398 ಹಾಗೂ ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-8), ವಿಧಾನಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿ : ಓಡಿಜಿಸಿ.